ಶಿಕ್ಷಕರರನ್ನು ನೇಮಿಸಲಾಗಿದೆಯೆಂದು ಹೇಳಿ ನೇಮಿಸದೆ ಇರುವುದು ಎಂಬ ತಪ್ಪು ಮಾಹಿತಿಯನ್ನು ನೀಡಿರುವುದು ಸರ್ಕಾರಕ್ಕೆ ತಿಳಿದಿದೆಯೇ;

ಆ) ಉಪ ನಿರ್ದೇಶಕರು, ಸಾ.ಶಿ.ಇ. ಗುಲ್ಬರ್ಗ, ಇವರ ಸಮಕ್ಷಮದಲ್ಲಿ ದಿ. 2.1.92ರಂದು ಆಲ್ಲೂರು (ಬಿ) ಶಾಲೆಯ ಶಿಕ್ಷಕರ ಕಡತವನ್ನು ನೋಡಿದರೆ ಒಬ್ಬರೇ ಶಿಕ್ಷಕರು ಇರುವರೆಂದು ಕಂಡು ಬಂದಿದ್ದು ನಿಜವಲ್ಲವೇ;

ಇ) ಇಂತ ತಪ್ಪು ಉತ್ತರ ನೀಡಿ ಸರ್ಕಾರಕ್ಕೆ ಮರೆಮಾಚಿ ವಿದ್ಯಾರ್ಥಿಗಳ ಜೀವನವನ್ನು ಹಾಳು ಮಾಡಿರುವ ಅಧಿಕಾರಿಗಳನ್ನು ಅಮಾನತ್ತಿನಲ್ಲಿ ಇಡಲು ಸರ್ಕಾರ ಕೈಗೊಂಡ ಕ್ರಮವೇನು;

ಈ) ಹೆಚ್ಚಿನ ಶಿಕ್ಷಕರನ್ನು ಶಾಲೆಗೆ ನೇಮಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ?

ಡಾ।। ಹೆಗ್ಗಪ್ಪ ಡಿ. ಲಮಾಣಿ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು):–

ಅ) ಒಂದನೇ ತರಗತಿಯಿಂದ 7ನೇ ತರಗತಿಯವರೆಗೆ ಶಾಲೆಯ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ – 169. ಶಾಲೆಗೆ ಒಂದು ಹುದ್ದೆ (ಶಿಕ್ಷಕರ) ಮಂಜೂರಾಗಿದ್ದು ಮತ್ತೊಬ್ಬ ಶಿಕ್ಷಕರು ನಿಯೋಜನೆ ಮೇಲೆ ಕೆಲಸ ನಿರ್ವಹಿಸುತ್ತಿದ್ದು – ಹೀಗೆ ಹಾಲಿ ಇಬ್ಬರು ಶಿಕ್ಷಕರಿದ್ದಾರೆ.

ಆ) ಸದರಿ ಶಾಲೆಗೇ ಮಂಜೂರಾದ ಶಿಕ್ಷಕರ ಸಂಖ್ಯೆ ಒಂದು ಇರುವುದು ಶಿಕ್ಷಕರ ಕಡತದಲ್ಲಿ ಕಂಡು ಬಂದುದು ನಿಜ.

ಇ) ಉದ್ಭವಿಸುವುದಿಲ್ಲ.

ಈ) ತಾತ್ಕಾಲಿಕವಾಗಿ ಒಬ್ಬ ಶಿಕ್ಷಕರನ್ನು ನಿಯೋಜನೆ ಮಾಡಲಾಗಿದೆ, ಹಾಗೂ ಶಿಕ್ಷಕರ ಹುದ್ದೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಗುಲ್ಬರ್ಗಾ ಜಿಲ್ಲೆಯ ಸೇಡಂ ನಗರದ ಪ್ರಥಮ ದರ್ಜೆ ಮಹಾವಿದ್ಯಾಲಯಕ್ಕೆ ಹೆಚ್ಚಿನ ಉಪನ್ಯಾಸಕರ ನೇಮಕ

308 (881) ಶ್ರೀ ಬಸವಂತರೆಡ್ಡಿ ಮೋತಕಪಲ್ಲಿ (ಸೇಡಂ):-

ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಗುಲ್ಬರ್ಗಾ ಜಿಲ್ಲೆಯ ಸೇಡಂ ನಗರದ ಪ್ರಥಮ ದರ್ಜೆ ಮಹಾವಿದ್ಯಾಲಯದಲ್ಲಿ ಸಾಕಷ್ಟು (ಕೇವಲ ಇಬ್ಬರೇ ಉಪನ್ಯಾಸಕರು ಇರುವರು) ಉಪನ್ಯಾಸಕರಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸದರಿ ವಿದ್ಯಾಲಯಕ್ಕೆ ಸಾಕಷ್ಟು ಉಪನ್ಯಾಸಕರನ್ನು ನೇಮಿಸದಿರುವುದರಿಂದ ಅಲ್ಲಿಯ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ಉಪನ್ಯಾಸಕರಿಗೆ ಕೇವಲ 400 ರೂ.ಗಳನ್ನು ಸರ್ಕಾರವು ನೀಡಿರುವುದರಿಂದ ಉಪನ್ಯಾಸಕರು ಬಾರದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಈ ರೀತಿ ಉಪನ್ಯಾಸಕರಿಲ್ಲದಿರುವುದರಿಂದ ವಿದ್ಯಾರ್ಥಿಗಳಿಗೆ ಪರೀಕ್ಷೆಯ ಕಾಲದಲ್ಲಿ ತೊಂದರೆಯಾಗುತ್ತಿರುವುದು ಸರ್ಕಾರಕ್ಕೆ ತಿಳಿದಿದೆಯೇ;

ಉ) ಹಾಗಿದ್ದಲ್ಲಿ ಈ ತೊಂದರೆಯನ್ನು ಹೋಗಲಾಡಿಸಲು ಹಾಗೂ ಉಪನ್ಯಾಸಕರನ್ನು ನೇಮಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ?

ಶ್ರೀ ಎಸ್.ಎಂ. ಯಾಹ್ಯಾ (ಉನ್ನತ ಶಿಕ್ಷಣ ಸಚಿವರು):–

ಅ) ಬಂದಿದೆ.

ಆ) ಒಬ್ಬ ಪೂರ್ಣಕಾಲಿಕ ಉಪನ್ಯಾಸಕರ ಸ್ಥಾನದಲ್ಲಿ ಇಬ್ಬರು ಅರೆಕಾಲಿಕ ಉಪನ್ಯಾಸಕರನ್ನು ನೇಮಿಸಿ ವಿದ್ಯಾರ್ಥಿಗಳ ಪಾಠ ಪ್ರವಚನಕ್ಕೆ ತೊಂದರೆಯಾಗದಂತೆ ಗಮನ ವಹಿಸಲಾಗಿದೆ.

ಇ) ಸದರಿ ಕಾಲೇಜಿನಲ್ಲಿ ಗುತ್ತಿಗೆ ಆಧಾರದ ಮೇಲೆ ಉಪನ್ಯಾಸಕರನ್ನು ನೇಮಿಸಿಲ್ಲ. ಅರೆಕಾಲಿಕ ಉಪನ್ಯಾಸಕರಿಗೆ ಮಾಸಿಕ 600 ರೂಪಾಯಿಗಳ ಅಂಶಕಾಲಿಕ ಭತ್ಯೆ ನೀಡಲಾಗುತ್ತಿದೆ.

ಈ) ಪ್ರಶ್ನೆ (ಅ)ದಲ್ಲಿನ ಉತ್ತರದಿಂದಾಗಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಈ ವಿಷಯವು ಸರ್ಕಾರದ ತೀವ್ರ ಪರಿಶೀಲನೆಯಲ್ಲಿದ್ದು ಈ ದಿಶೆಯಲ್ಲಿ ತ್ವರಿತ ಕ್ರಮ ಕೈಗೊಳ್ಳಲಾಗುವುದು.

ವಿಶ್ವವಿದ್ಯಾನಿಲಯಗಳ ಪರೀಕ್ಷಾ ಪದ್ಧತಿಯಲ್ಲಿ ಲೋಪದೋಷಗಳು

309 (937) ಪಿ.ಜಿ.ಆರ್. ಸಿಂಧ್ಯ (ಕನಕಪುರ):-

ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

1. ರಾಜ್ಯದ ವಿವಿಧ ವಿಶ್ವವಿದ್ಯಾನಿಲಯಗಳ ಪರೀಕ್ಷಾ ಪದ್ಧತಿಯಲ್ಲಿ ಲೋಪ ದೋಷಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

2. ಕಳೆದ ಎರಡು ವರ್ಷಗಳಲ್ಲಿ ಈ ಲೋಪದೋಷಗಳ ಬಗ್ಗೆ ವಿಚಾರಣೆ ನಡೆದಿದೆಯೇ;

3. ನಡೆದಿದ್ದಲ್ಲಿ ಇವುಗಳ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು;

4. ಈಗಿರುವ ಪರೀಕ್ಷಾ ಪದ್ಧತಿಯನ್ನು ಬದಲಾವಣೆ ಮಾಡುವ ಯೋಜನೆ ಸರ್ಕಾರದ ಮುಂದೆ ಇದೆಯೇ ?

ಶ್ರೀ ಎಸ್.ಎಂ. ಯಾಹ್ಯಾ (ಉನ್ನತ ಶಿಕ್ಷಣ ಸಚಿವರು):–

1. ಇಲ್ಲ.

2. ಉದ್ಭವಿಸುವುದಿಲ್ಲ.

3. ಉದ್ಭವಿಸುವುದಿಲ್ಲ.

4. ಇಲ್ಲ.

ವಯಸ್ಕರ ಶಿಕ್ಷಣ ಇಲಾಖೆಯ ಸಿಬ್ಬಂದಿಯ ಸಂಖ್ಯೆ

310 (938) ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ):-

ವಯಸ್ಕರ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?